ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE 8/9/2020

# ಹರತಾಳು ಹಾಲಪ್ಪ ಆಸ್ಪತ್ರೆಗೆ ದಾಖಲು

8/9/20

ಸಾಗರ: ಇತ್ತೀಚೆಗಷ್ಟೇ ಕೊರೊನಾ ಸೋಂಕಿನಿಂದ ಗುಣಮುಖರಾಗಿದ್ದ ಶಾಸಕ ಹಾಗೂ ಎಂಎಸ್‌ಐಎಲ್ ಅಧ್ಯಕ್ಷ



ಎಚ್.ಹಾಲಪ್ಪ ಹರತಾಳು ಆರೋಗ್ಯ ಸೋಮವಾರ ಏಕಾಏಕಿ ಏರುಪೇರಾಗಿದೆ. ಹೀಗಾಗಿ ತಮ್ಮ ಎಲ್ಲ ಕಾರ್ಯಕ್ರಮಗಳನ್ನು ರದ್ದು ಮಾಡಿ ಬೆಂಗಳೂರಿನ ಮಣಿಪಾಲ ಆಸ್ಪತ್ರೆಗೆ ತೆರಳಿದ್ದಾರೆ. ಕಳೆದ ವಾರವಷ್ಟೇ ಬೆಂಗಳೂರಿನಿಂದ ಸಾಗರಕ್ಕೆ ಆಗಮಿಸಿದ್ದ ಹಾಲಪ್ಪ, ಗುರುವಾರದಿಂದ ತಾಲೂಕಿನ ವಿವಿಧ ಕಾರ್ಯಕ್ರಮ, ಸಭೆಗಳಲ್ಲಿ ಭಾಗವಹಿಸಿದ್ದರು. ಸೋಮವಾರ ಭಾರಂಗಿ ಹೋಬಳಿಯ ಭೂಕುಸಿತದ ಪ್ರದೇಶಕ್ಕೆ ಭೇಟಿ ನೀಡುವ ಪ್ರವಾಸ ನಿಗದಿಯಾಗಿತ್ತು. ಆದರೆ ಅನಾರೋಗ್ಯದ ಕಾರಣ ಎಲ್ಲ ಕಾರ್ಯಕ್ರಮ ರದ್ದುಪಡಿಸಲಾಗಿತ್ತು. ಭಾನುವಾರದಿಂದಲೇ ಬಳಲಿಕೆಯಿದ್ದು ಸೋಮವಾರ ಹೊಟ್ಟೆ, ಎದೆ, ಬೆನ್ನು ನೋವು ಕಾಣಿಸಿಕೊಂಡಿದೆ. ಶಾಸಕರ ಮನೆಗೆ ತೆರಳಿದ ಸ್ಥಳೀಯ ವೈದ್ಯರು ಇಸಿಜಿ ಸೇರಿ ಅಗತ್ಯ ತಪಾಸಣೆ ಮಾಡಿದ್ದಾರೆ. ಡ್ರಿಪ್ಸ್ ಕೂಡ ನೀಡಲಾಗಿದೆ. ಆದರೆ ಸೋಮವಾರ ಮಧ್ಯಾಹ್ನದ ವೇಳೆ ಆರೋಗ್ಯ ಹದಗೆಟ್ಟಿದ್ದರಿಂದ ತಕ್ಷಣ ಬೆಂಗಳೂರಿನ ಮಣಿಪಾಲ ಆಸ್ಪತ್ರೆಗೆ ದಾಖಲಾಗಲು ತೆರಳಿದ್ದಾರೆ.